ಜಿಲ್ಲಾಧಿಕಾರಿಗಳ ಹಾಗೂ
ಜಿಲ್ಲಾ ದಂಡಾಧಿಕಾರಿಗಳ ಕಾರ್ಯಾಲಯ
ಕೊಡಗು ಜಿಲ್ಲೆ, ಮಡಿಕೇರಿ-571201

ಕರ್ನಾಟಕ ಸರ್ಕಾರ

ಕಛೇರಿ: 08272-225500
ನಿವಾಸ: 08272-225700
ಫ್ಯಾಕ್ಸ್: 08272-225900
ಈ-ಮೇಲ್:deo.kodagu@gmail.com
ವೆಬ್ ಸೈಟ್: http://www.kodagu.nic.in

---

ಸಂಖ್ಯೆ:ಪ್ರವಿ./ 4 /2018-19 ದಿನಾಂಕ: 20-09-2018

## ಅಧಿಕೃತ ಜ್ಞಾಪನ

ವಿಷಯ: ಕೊಡಗು ಜಿಲ್ಲೆಯ ಪ್ರಕೃತಿ ವಿಕೋಪ ಪರಿಹಾರ ಕಾರ್ಯ ಸಂಬಂಧ ನಿಯೋಜಿತರಾದ ಅಧಿಕಾರಿ ಮತ್ತು ಸಿಬ್ಬಂದಿಗಳ ಬಿಡುಗಡೆಗೊಳಿಸುವ ಬಗ್ಗೆ.

ಉಲ್ಲೇಖ: 1) ಜಿಲ್ಲಾಧಿಕಾರಿಯವರು, ಚಾಮರಾಜನಗರ ಜಿಲ್ಲೆ, ಚಾಮರಾಜನಗರ ರವರ ಪತ್ರ ಸಂಖ್ಯೆ: ಸಿಎಎಲ್(1)ಸಿಆರ್:160:2017-18, ದಿನಾಂಕ 03.09.2018

2) ಜಿಲ್ಲಾಧಿಕಾರಿಯವರು, ಚಾಮರಾಜನಗರ ಜಿಲ್ಲೆ, ಚಾಮರಾಜನಗರ ರವರ ಪತ್ರ ಸಂಖ್ಯೆ: ಸಿಎಎಲ್(1)ಸಿಆರ್:160:2017-18, ದಿನಾಂಕ 17.09.2018

---

ಕೊಡಗು ಜಿಲ್ಲೆಯಲ್ಲಿ ಭಾರೀ ಗಾಳಿ ಮಳೆಯಿಂದ ಮಡಿಕೇರಿ ನಗರದ ಸುತ್ತಮುತ್ತ ಹಾಗೂ ಜಿಲ್ಲೆಯ ಹಲವೆಡೆ ಜಲಾವೃತ ಮತ್ತು ಭೂಕುಸಿತದಿಂದ ಮಾನವ/ ಜಾನುವಾರು ಜೀವಹಾನಿ, ಮನೆಹಾನಿ, ರಸ್ತೆಹಾನಿ ಸೇರಿದಂತೆ ಹಲವು ನಷ್ಟಗಳು ಆಗಿರುತ್ತದೆ. ಪ್ರಸ್ತುತ ಪರಿಹಾರ ವಿತರಣೆ, ಮೂಲ ಸೌಲಭ್ಯ ಕಲ್ಪಿಸುವಿಕೆ / ಪುನರ್ ನಿರ್ಮಾಣ ಕಾರ್ಯ ಪ್ರಗತಿಯಲ್ಲಿರುತ್ತದೆ. ಈ ಸಂಬಂಧ ಉಲ್ಲೇಖ(1)ರ ಜಿಲ್ಲಾಧಿಕಾರಿಯವರು, ಚಾಮರಾಜನಗರ ಜಿಲ್ಲೆ, ಚಾಮರಾಜನಗರ ರವರ ಅಧಿಕೃತ ಜ್ಞಾಪನದಂತೆ 10 ಅಧಿಕಾರಿ / ಸಿಬ್ಬಂದಿಗಳನ್ನು ಈ ಜಿಲ್ಲೆಗೆ ತಾತ್ಕಾಲಿಕವಾಗಿ ನಿಯೋಜಿಸಲಾಗಿರುತ್ತದೆ. ನಿಯೋಜಿತ ಅಧಿಕಾರಿ ಮತ್ತು ಸಿಬ್ಬಂದಿಗಳು ದಿನಾಂಕ 04.09.2018ರಿಂದ ಇಲ್ಲಿಯವರೆಗೂ ಸಮರೋಪಾದಿಯಲ್ಲಿ ಮತ್ತು ಪ್ರಶಂಸನೀಯ ರೀತಿಯಲ್ಲಿ ಕರ್ತವ್ಯ ನಿರ್ವಹಿಸಿರುತ್ತಾರೆ.

ಪ್ರಸ್ತುತ, ಉಲ್ಲೇಖ(2)ರ ಅಧಿಕೃತ ಜ್ಞಾಪನದಂತೆ 9 ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ನಿಯೋಜಿಸುತ್ತಾರೆ. ಆದುದರಿಂದ ಉಲ್ಲೇಖ(1)ರ ಅಧಿಕೃತ ಜ್ಞಾಪನದಂತೆ ನಿಯೋಜಿತರಾದ ಕಂದಾಯ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ದಿನಾಂಕ 20.09.2018ರಂದು ಅಪರಾಹ್ನ ಕರ್ತವ್ಯದಿಂದ ಬಿಡುಗಡೆಗೊಳಿಸಿದೆ.

ಜಿಲ್ಲಾಧಿಕಾರಿ,
ಕೊಡಗು ಜಿಲ್ಲೆ, ಮಡಿಕೇರಿ.

ಪ್ರತಿಯನ್ನು:

1) ಜಿಲ್ಲಾಧಿಕಾರಿಯವರು, ಚಾಮರಾಜನಗರ ಜಿಲ್ಲೆ, ಚಾಮರಾಜನಗರ ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2) ಸಂಬಂಧಪಟ್ಟ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಸೂಕ್ತ ಕ್ರಮಕ್ಕಾಗಿ.